ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 511

ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 05-02-2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕೊಡಗು ಜಿಲ್ಲೆಯ ಹಲವಾರು ಪಟ್ಟಣಗಳಲ್ಲಿ ಕೆ.ಎಸ್.ಆರ್.ಟಿ.ಸಿ. ಸುಸಜ್ಜಿತ ಬಸ್ ನಿಲ್ದಾಣಗಳು ಇಲ್ಲದೇ ಇರುವುದರಿಂದ, ಸಾರ್ವಜನಿಕರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಸ್ತುತ ಕೊಡಗು ಜಿಲ್ಲೆಯ ಮಡಿಕೇರಿ, ಸೋಮವಾರಪೇಟೆ, ವಿರಾಜಪೇಟೆ, ಕುಶಾಲನಗರ, ಹೆಬ್ಬಾಲೆಗಳಲ್ಲಿ ಕ.ರಾ.ರ.ಸಾ.ನಿಗಮದ ಒಟ್ಟು 5 ಬಸ್ ನಿಲ್ದಾಣಗಳಿದ್ದು, ಸದರಿ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರಿನ ವ್ಯವಸ್ಥೆ, ಮಹಿಳೆಯರ ಮತ್ತು ಪುರುಷರ ಶೌಚಾಲಯ ವ್ಯವಸ್ಥೆ, ಪ್ರಯಾಣಿಕರಿಗೆ ಆಸನ ವ್ಯವಸ್ಥೆ, ವಿದ್ಯುತ್ ಬೆಳಕಿನ ವ್ಯವಸ್ಥೆ, ಸಾರ್ವಜನಿಕ ಪ್ರಯಾಣಿಕರಿಗೆ ಉಪಹಾರ ಗೃಹದ ವ್ಯವಸ್ಥೆ, ವಿಚಾರಣೆ ಕೌಂಟರ್ ಹಾಗೂ ಪಾರ್ಕಿಂಗ್ ಸೌಲಭ್ಯಗಳನ್ನು ಒದಗಿಸಲಾಗಿದೆ. ಅಲ್ಲದೇ, ಮಡಿಕೇರಿ, ಸೋಮವಾರಪೇಟೆ, ವಿರಾಜಪೇಟೆ ಹಾಗೂ ಕುಶಾಲನಗರ ಬಸ್ ನಿಲ್ದಾಣಗಳಲ್ಲಿ ಮಹಿಳೆಯರ ವಿಶ್ರಾಂತಿ ಕೊಠಡಿ, ಮಹಿಳೆಯರ ಶಿಶುಪಾಲನಾ ಕೊಠಡಿ, ವಿಶೇಷಚೇತನರಿಗೆ ಶೌಚಾಲಯ ವ್ಯವಸ್ಥೆ, ಸಿಬ್ಬಂದಿ ವಿಶ್ರಾಂತಿ ಗೃಹದ ವ್ಯವಸ್ಥೆ ಕಲ್ಪಿಸಲಾಗಿದೆ ಹಾಗೂ ಮಡಿಕೇರಿ, ವಿರಾಜಪೇಟೆ ಮತ್ತು ಕುಶಾಲನಗರ ಬಸ್ ನಿಲ್ದಾಣಗಳಲ್ಲಿ ಮುಂಗಡ ಟಿಕೆಟ್ ಕಾಯ್ದಿರಿಸುವ ಕೊಠಡಿ ನಿರ್ಮಿಸಲಾಗಿದೆ.
ಆ	ಬಂದಿದ್ದಲ್ಲಿ, ಪ್ರಸಕ್ತ ಆರ್ಥಿಕ ವರ್ಷದಲ್ಲಿ ಹೊಸ ಬಸ್ ನಿಲ್ದಾಣಗಳ ನಿರ್ಮಾಣಕ್ಕೆ ಕೊಡಗು ಜಿಲ್ಲೆಗೆ ಎಷ್ಟು ಅನುದಾನ ಒದಗಿಸಲಾಗಿದೆ; ಮತ್ತು ಯಾವ ಯಾವ ಪಟ್ಟಣಗಳಲ್ಲಿ ಹೊಸದಾಗಿ ಬಸ್ ನಿಲ್ದಾಣಗಳನ್ನು ನಿರ್ಮಾಣ ಮಾಡಲಾಗುತ್ತಿದೆ; (ವಿವರ ನೀಡುವುದು)	ಪ್ರಸ್ತುತ ಕೋವಿಡ್-19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ನಿಗಮದ ಆರ್ಥಿಕ ಪರಿಸ್ಥಿತಿ ಉತ್ತಮವಾಗಿರದ ಕಾರಣ, ಹೊಸದಾಗಿ ಯಾವುದೇ ಬಸ್ ನಿಲ್ದಾಣ/ಬಸ್ ಘಟಕ / ಅಭಿವೃದ್ಧಿ ಕಾಮಗಾರಿ ಕೆಲಸಗಳನ್ನು ನಿಗಮದ ವತಿಯಿಂದ ಕೈಗೊಳ್ಳುತ್ತಿರುವುದಿಲ್ಲ.
ಇ	ಹಾಲಿ ಇರುವ ಬಸ್ ನಿಲ್ದಾಣಗಳ ಉನ್ನತೀಕರಣ ಅಥವಾ ಮೇಲ್ದರ್ಜೆಗೇರಿಸಲು ಪ್ರಸಕ್ತ ಆರ್ಥಿಕ ವರ್ಷದಲ್ಲಿ ಎಷ್ಟು ಅನುದಾನ ಒದಗಿಸಲಾಗಿದೆ? (ವಿವರ ನೀಡುವುದು)	ಪ್ರಸಕ್ತ ಆರ್ಥಿಕ ವರ್ಷದಲ್ಲಿ ಹಾಲಿ ಇರುವ ಬಸ್ ನಿಲ್ದಾಣಗಳ ಉನ್ನತೀಕರಣ / ಮೇಲ್ದರ್ಜೆಗೇರಿಸಲು ಯಾವುದೇ ಅನುದಾನವನ್ನು ಹಂಚಿಕೆಯಾಗಿರುವುದಿಲ್ಲ. ಆದಾಗ್ಯೂ, 2018-19 ಮತ್ತು 2019-20ನೇ ಸಾಲಿನಲ್ಲಿ ಬಂಡವಾಳ ವೆಚ್ಚಗಳ ಅನುದಾನದಡಿ ಮಡಿಕೇರಿ ಬಸ್ ನಿಲ್ದಾಣವನ್ನು ರೂ.100.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಮೇಲ್ದರ್ಜೆಗೇರಿಸುವ ಹಾಗೂ ಕುಶಾಲನಗರ ಬಸ್ ನಿಲ್ದಾಣವನ್ನು ರೂ.75.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.

ಸಂಖ್ಯೆ: ಟಿಡಿ 38 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು